# ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1009
2. ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ, (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ: : 22.9.2022
4. ಉತ್ತರಿಸುವವರು : ಮಾನ್ಯ ಮುಖ್ಯ ಮಂತ್ರಿಯವರು

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಜಿಲ್ಲಾ /ತಾಲ್ಲೂಕು ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸಿದ ನಂತರವೂ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಧೀಕ್ಷಕರು/ವ್ಯವಸ್ಥಾಪಕರುಗಳಿಗೆ ಮುಂದಿನ ಬಡ್ತಿ ನೀಡುವ ವಿಚಾರದಲ್ಲಿ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ತಯಾರಿಸಲು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಧೀಕ್ಷಕ/ ವ್ಯವಸ್ಥಾಪಕ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಯಾವುದೇ ವಿಳಂಬವಿಲ್ಲದೆ, ದಿ:05.9.2022 ರಂದು ಹೊರಡಿಸಲಾಗಿರುತ್ತದೆ. |
| (ಆ) | ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಧೀಕ್ಷಕರು/ವ್ಯವಸ್ಥಾಪಕರುಗಳಿಗೆ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಸರ್ಕಾರದ ಹಂತದಲ್ಲಿ ಅಂತಿಮಗೊಳಿಸಿದ್ದಲ್ಲಿ, ಬಡ್ತಿ ನೀಡಲು ಇರುವ ತೊಡಕುಗಳೇನು; | ಜಿಲ್ಲಾ/ತಾಲ್ಲೂಕು ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಧೀಕ್ಷಕರು/ವ್ಯವಸ್ಥಾಪಕರುಗಳಿಗೆ ಮುಂಬಡ್ತಿ ನೀಡಲು ಉದ್ದೇಶಿಸಿರುವ ಹುದ್ದೆಗಳು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳ ವೃಂದ ಬಲದಲ್ಲಾಗಲಿ, ಇತ್ತೀಚಿಗೆ ರಚಿಸಲಾದ ಕರ್ನಾಟಕ ಸಾಮಾನ್ಯ ಸೇವೆ |

| | | |
|---|---|---|
| (ಇ) | ಹಾಗಿದ್ದಲ್ಲಿ, ಈಗಾಗಲೇ ಬಡ್ತಿಯಿಂದ ವಂಚಿತರಾಗಿ ನಿವೃತ್ತಿ ಅಂಚಿನಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಬಡ್ತಿ ನೀಡುವ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು. | (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು-2020 ರ ವೃಂದ ಬಲದಲ್ಲಿ ಸೇರ್ಪಡೆಯಾಗಿರುವುದಿಲ್ಲ. ಆದ್ದರಿಂದ, ಚಾಲ್ತಿ ಇರುವ ನಿಯಮಗಳಡಿ ಸೂಕ್ತ ಅವಕಾಶಗಳನ್ನು ಮಾಡಿಕೊಂಡ ನಂತರವಷ್ಟೇ ಮುಂಬಡ್ತಿ ಪ್ರಕ್ರಿಯೆಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತದೆ. ಅದರಂತೆ, ಸೂಕ್ತ ಅವಕಾಶಗಳನ್ನು ಮಾಡಿಕೊಳ್ಳುವ ಕ್ರಮ/ಪ್ರಕ್ರಿಯೆಗಳು ಪ್ರಗತಿಯಲ್ಲಿರುತ್ತವೆ. |

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿ